**All India Radio: Bangalore**
**National Bulletins In Kannada**
**22.07.2025 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

೧. ಉಪರಾಷ್ಟ್ರಪತಿ ಸ್ಥಾನಕ್ಕೆ ಜಗದೀಪ್ ಧನ್‌ಕರ್ ರಾಜೀನಾಮೆ

೨. ಅಕ್ರಮ ಬೆಟ್ಟಿಂಗ್ ಆಪ್‌ಗಳ ಪ್ರಚಾರ: ನಟ ಪ್ರಕಾಶ್ ರಾಜ್ ಸೇರಿ ನಾಲ್ವರಿಗೆ ಇ.ಡಿ. ಸಮನ್ಸ್

೩. ಬಾಂಗ್ಲಾದೇಶ ವಿಮಾನ ದುರಂತ: ಮೃತಪಟ್ಟವರ ಸಂಖ್ಯೆ ೨೦ಕ್ಕೆ ಏರಿಕೆ

೪. ಫಿಡೆ ಮಹಿಳಾ ಚೆಸ್ ವಿಶ್ವಕಪ್: ಸೆಮಿಫೈನಲ್ ಪ್ರವೇಶಿಸಿದ ಭಾರತದ ದಿವ್ಯಾ ದೇಶಮುಖ್

><><><><><><><><><><><><

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು ಆರೋಗ್ಯ ಕಾರಣಗಳನ್ನು ನೀಡಿ ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಬರೆದ ಪತ್ರದಲ್ಲಿ, ಆರೋಗ್ಯ ರಕ್ಷಣೆಗೆ ಆದ್ಯತೆ ನೀಡಲು ಮತ್ತು ವೈದ್ಯಕೀಯ ಸಲಹೆಯನ್ನು ಪಾಲಿಸಲು, ತಕ್ಷಣವೇ ಜಾರಿಗೆ ಬರುವಂತೆ ಉಪರಾಷ್ಟ್ರಪತಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದೇನೆ ಎಂದು ಹೇಳಿದ್ದಾರೆ. ತಮ್ಮ ಅಧಿಕಾರಾವಧಿಯಲ್ಲಿ ನೀಡಿದ ಅಚಲ ಬೆಂಬಲಕ್ಕಾಗಿ ಅವರು ರಾಷ್ಟ್ರಪತಿಗಳಿಗೆ ಕೃತಜ್ಞತೆ ಸಲ್ಲಿಸಿದ್ದಾರೆ. ಜತೆಗೆ ಪ್ರಧಾನಿ ನರೇಂದ್ರ ಮೋದಿ ಮತ್ತು ಸಚಿವ ಸಂಪುಟಕ್ಕೆ ಜಗದೀಪ್ ಧನ್‌ಕರ್ ಅವರು ಕೃತಜ್ಞತೆಯನ್ನು ವ್ಯಕ್ತಪಡಿಸಿದ್ದಾರೆ.

><><><><><><><><><><><><

ಲೋಕಸಭೆಯಲ್ಲಿ ನಿನ್ನೆ ಕಲಾಪದ ಮೊದಲ ದಿನ ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು 'ಆಪರೇಷನ್ ಸಿಂದೂರ್' ಕುರಿತ ಚರ್ಚೆಗೆ ಪ್ರತಿಪಕ್ಷ ನಾಯಕರು ಒತ್ತಾಯಿಸಿದರು. ಮೂರು ಬಾರಿ ಮುಂದೂಡಿಕೆಯ ಬಳಿಕ ಸಂಜೆ ಸದನ ಸೇರುತ್ತಿದ್ದಂತೆಯೇ ಕಾಂಗ್ರೆಸ್, ಡಿಎಂಕೆ, ಸಮಾಜವಾದಿ ಪಕ್ಷದ ಸದಸ್ಯರು ಘೋಷಣೆ ಕೂಗಿದರು. ಬಳಿಕ ಸದನದಲ್ಲಿ ಗದ್ದಲದ ವಾತಾವರಣ ನಿರ್ಮಾಣವಾದ ಹಿನ್ನೆಲೆಯಲ್ಲಿ ಕಲಾಪವನ್ನು ಇಂದಿಗೆ ಮುಂದೂಡಲಾಯಿತು. ವಿರೋಧ ಪಕ್ಷದ ಸದಸ್ಯರು, ಶೂನ್ಯ ವೇಳೆಯಲ್ಲಿ

ಭಾಗವಹಿಸುವಂತೆ ಸಭಾಧ್ಯಕ್ಷರು ಪದೇ ಪದೆ ಮನವಿ ಮಾಡಿದರು. ಮಧ್ಯ ಪ್ರವೇಶಿಸಿದ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಸರ್ಕಾರ ಚರ್ಚೆಗೆ ಸಿದ್ಧವಿದೆ ಎಂದು ಹೇಳಿದರು. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕೂಡ ಸರ್ಕಾರ ಚರ್ಚೆಗೆ ಸಿದ್ಧವಿದೆ ಎಂದರು. ಆದರೂ, ವಿರೋಧ ಪಕ್ಷದ ಸದಸ್ಯರು ತಮ್ಮ ಘೋಷಣೆಗಳನ್ನು ಮುಂದುವರೆಸಿದರು. ಇದಕ್ಕೂ ಮೊದಲು, ಲೋಕಸಭೆಯಲ್ಲಿ ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟವರಿಗೆ ಹಾಗೂ ಏರ್ ಇಂಡಿಯಾ ವಿಮಾನ ದುರಂತದಲ್ಲಿ ಸಾವನ್ನಪ್ಪಿದವರಿಗೆ ಸಂತಾಪ ಸೂಚಿಸಲಾಯಿತು. ನಂತರ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಪ್ರಯಾಣಿಸಿದ ಭಾರತದ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಹಾಗೂ ಇಸ್ರೋ ಸಾಧನೆ ಬಗ್ಗೆ ಸದನದ ಪರವಾಗಿ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅಭಿನಂದನೆ ಸಲ್ಲಿಸಿದರು.

><><><><><><><><><

ಸರಕು ಸಾಗಣೆ ಮಸೂದೆ ೨೦೨೫ ಕ್ಕೆ ರಾಜ್ಯಸಭೆಯು ಅನುಮೋದನೆ ನೀಡುವ ಮೂಲಕ ಸಂಸತ್ತು ಈ ಮಸೂದೆಯನ್ನು ಅಂಗೀಕರಿಸಿದೆ. ಲೋಕಸಭೆಯು, ಕಳೆದ ಮಾರ್ಚ್‌ನಲ್ಲಿ ಈ ವಿಧೇಯಕವನ್ನು ಅಂಗೀಕರಿಸಿತ್ತು. ಸಾಗಣೆ ದಾಖಲೆಗಳಿಗಾಗಿ ಕಾನೂನು ಚೌಕಟ್ಟನ್ನು ನವೀಕರಿಸುವುದು ಮತ್ತು ಸರಳಗೊಳಿಸುವ ಗುರಿಯನ್ನು ಈ ಮಸೂದೆ ಹೊಂದಿದೆ. ೧೮೫೬ ರ ಭಾರತೀಯ ಸರಕು ಸಾಗಣೆ ಮಸೂದೆಗಳ ಕಾಯ್ದೆಯನ್ನು ಇದು ಮಾರ್ಪಡಿಸುತ್ತದೆ. ಈ ಮಸೂದೆಯು, ಸಾಗಿಸಲಾಗುವ ಸರಕುಗಳ ಪ್ರಕಾರ, ಪ್ರಮಾಣ, ಸ್ಥಿತಿ ಮತ್ತು ಗಮ್ಯಸ್ಥಾನ ಸೇರಿದಂತೆ ವಿವರಗಳನ್ನು ಒಳಗೊಂಡಿರಲಿದ್ದು, ಸರಕು ಸಾಗಣೆದಾರರಿಗೆ ನೀಡಲಾಗುತ್ತದೆ.

><><><><><><><><><

ಹಣದುಬ್ಬರವನ್ನು ನಿಯಂತ್ರಿಸಲು ಕೇಂದ್ರ ಸರ್ಕಾರ ಹಲವಾರು ಕ್ರಮಗಳನ್ನು ತೆಗೆದುಕೊಂಡಿದ್ದು, ಸುಸ್ಥಿರ ಉದ್ಯೋಗ ಸೃಷ್ಟಿ ಮತ್ತು ಮನೆಯ ಆದಾಯವನ್ನು ಸುಧಾರಿಸುವತ್ತ ಗಮನಹರಿಸಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಲೋಕಸಭೆಯಲ್ಲಿ ನಿನ್ನೆ ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರದಲ್ಲಿ ಈ ವಿಷಯ ತಿಳಿಸಿದ ಅವರು, ಅಗತ್ಯ ಆಹಾರ ಪದಾರ್ಥಗಳ ದಾಸ್ತಾನು ಹೆಚ್ಚಿಸಲು, ಮುಕ್ತ ಮಾರುಕಟ್ಟೆಯಲ್ಲಿ ಸಂಗ್ರಹಿಸಿದ ಧಾನ್ಯಗಳ ಕಾರ್ಯತಂತ್ರದ ಮಾರಾಟವನ್ನು ನಡೆಸಲು ಮತ್ತು ಸಬ್ಸಿಡಿ ದರದಲ್ಲಿ ಆಯ್ದ ಆಹಾರ ಪದಾರ್ಥಗಳ ಚಿಲ್ಲರೆ ಮಾರಾಟವನ್ನು ಸುಗಮಗೊಳಿಸಲು ಸರ್ಕಾರ ನಿರ್ಧಾರ ತೆಗೆದುಕೊಂಡಿದೆ ಎಂದು ಮಾಹಿತಿ ನೀಡಿದ್ದಾರೆ. ಈ ಕ್ರಮಗಳ ಪರಿಣಾಮವಾಗಿ ಸರಾಸರಿ ಚಿಲ್ಲರೆ ಹಣದುಬ್ಬರ ದರವು ೨೦೨೩-೨೪ರಲ್ಲಿ ಶೇಕಡ ೫.೪ ರಿಂದ ೨೦೨೪-೨೫ರಲ್ಲಿ ಶೇಕಡ ೪.೬ ಕ್ಕೆ

ಇಳಿದಿದೆ. ಇದು ಕಳೆದ ಆರು ವರ್ಷಗಳಲ್ಲಿ ಅತ್ಯಂತ ಕಡಿಮೆಯಾಗಿದೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ.

><><><><><><><><><

ನ್ಯಾಯಮೂರ್ತಿ ಯಶವಂತ್ ವರ್ಮಾ ಅವರನ್ನು ಪದಚ್ಯುತಗೊಳಿಸುವಂತೆ ಕೋರಿ ಸಂಸತ್ ಸದಸ್ಯರು ನಿನ್ನೆ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಗೆ ಮನವಿ ಸಲ್ಲಿಸಿದ್ದಾರೆ. ಸಂವಿಧಾನದ ೧೨೪, ೨೧೭ ಮತ್ತು ೨೧೮ ನೇ ವಿಧಿಗಳ ಅಡಿಯಲ್ಲಿ ನ್ಯಾಯಮೂರ್ತಿ ಯಶವಂತ್ ವರ್ಮಾ ವಿರುದ್ಧದ ಮಹಾಭಿಯೋಗ ನಿರ್ಣಯಕ್ಕೆ ಒಟ್ಟು ೧೪೫ ಲೋಕಸಭಾ ಸದಸ್ಯರು ಸಹಿ ಹಾಕಿದ್ದಾರೆ. ನ್ಯಾಯಮೂರ್ತಿ ಯಶವಂತ್ ವರ್ಮಾ ಅವರ ನಿವಾಸದಲ್ಲಿ ನಗದು ವಶಪಡಿಸಿಕೊಂಡ ಪ್ರಕರಣಕ್ಕೆ ಸಂಬಂಧಿಸಿದ ವಿಷಯವನ್ನು ಸಂಸತ್ತು ವಿಚಾರಣೆ ನಡೆಸಲಿದೆ. ಈ ನಡುವೆ, ನ್ಯಾಯಮೂರ್ತಿ ಯಶವಂತ್ ವರ್ಮಾ ಅವರನ್ನು ಪದಚ್ಯುತಗೊಳಿಸುವ ನಿರ್ಣಯಕ್ಕೆ ರಾಜ್ಯಸಭೆಯ ೫೦ ಕ್ಕೂ ಹೆಚ್ಚು ಸದಸ್ಯರು ಸಹಿ ಹಾಕಿದ್ದಾರೆ ಎಂದು ರಾಜ್ಯಸಭಾಧ್ಯಕ್ಷ ಜಗದೀಪ್ ಧನ್‌ಕರ್ ಮಾಹಿತಿ ನೀಡಿದ್ದಾರೆ.

><><><><><><><><><

ಅಕ್ರಮ ಬೆಟ್ಟಿಂಗ್ ಅಪ್ಲಿಕೇಶನ್‌ಗಳ ಪ್ರಚಾರದ ಆರೋಪದಡಿ ನಟರಾದ ಪ್ರಕಾಶ್ ರಾಜ್, ರಾಣಾ ದಗ್ಗುಬಾಟಿ, ವಿಜಯ್ ದೇವರಕೊಂಡ ಮತ್ತು ನಟಿ ಲಕ್ಷ್ಮಿ ಮಂಚು ಅವರಿಗೆ ಜಾರಿ ನಿರ್ದೇಶನಾಲಯ ಸಮನ್ಸ್ ಜಾರಿ ಮಾಡಿದೆ. ಜುಲೈ ೨೩ ರಂದು ರಾಣಾ ದಗ್ಗುಬಾಟಿ, ಜುಲೈ ೩೦ ರಂದು ಪ್ರಕಾಶ್ ರಾಜ್, ಆಗಸ್ಟ್ ೬ ರಂದು ವಿಜಯ್ ದೇವರಕೊಂಡ ಮತ್ತು ಆಗಸ್ಟ್ ೧೨ ರಂದು ಲಕ್ಷ್ಮಿ ಮಂಚು ಅವರನ್ನು ವಿಚಾರಣೆಗೆ ಹಾಜರಾಗುವಂತೆ ಸಮನ್ಸ್ ನೀಡಲಾಗಿದೆ. ಅಕ್ರಮ ಬೆಟ್ಟಿಂಗ್ ಅಪ್ಲಿಕೇಶನ್‌ಗಳ ಪ್ರಚಾರದಲ್ಲಿ ತೊಡಗಿರುವ ವ್ಯಕ್ತಿಗಳ ವಿರುದ್ಧ ಜಾರಿ ನಿರ್ದೇಶನಾಲಯ ಇತ್ತೀಚೆಗೆ ಪ್ರಕರಣ ದಾಖಲಿಸಿದೆ.

><><><><><><><><><

ಬಾಂಗ್ಲಾದೇಶದ ಡಾಕಾದ ಬಳಿ ನಿನ್ನೆ ವಾಯುಪಡೆಯ ತರಬೇತಿ ಯುದ್ಧ ವಿಮಾನ, ಕಾಲೇಜು ಕಟ್ಟಡಕ್ಕೆ ಅಪ್ಪಳಿಸಿದ ಪರಿಣಾಮ ಸಂಭವಿಸಿದ ಅಪಘಾತದಲ್ಲಿ ಮೃತಪಟ್ಟವರ ಸಂಖ್ಯೆ ೨೦ಕ್ಕೆ ಏರಿಕೆಯಾಗಿದೆ. ಅಲ್ಲದೇ ೧೭೧ ಪ್ರಯಾಣಿಕರು ಗಾಯಗೊಂಡಿದ್ದು, ಅವರನ್ನು ಸ್ಥಳೀಯ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ. ಬಾಂಗ್ಲಾದೇಶ ವಾಯುಪಡೆಯ ಎಫ್‌೭ ವಿಮಾನವು ನಿನ್ನೆ ಮಧ್ಯಾಹ್ನ ೧ ಗಂಟೆ ೬ ನಿಮಿಷಕ್ಕೆ ಟೇಕ್ ಆಫ್ ಆದ ಕೆಲವೇ ಹೊತ್ತಿನಲ್ಲಿ ಮೈಲ್‌ಸ್ಟೋನ್ ಕಾಲೇಜಿನ ಕಟ್ಟಡಕ್ಕೆ ಅಪ್ಪಳಿಸಿದೆ. ಬಾಂಗ್ಲಾದೇಶ ಸೇನೆ ಮತ್ತು

ಅಗ್ನಿಶಾಮಕ ದಳ ಸಿಬ್ಬಂದಿ, ರಕ್ಷಣಾ ಕಾರ್ಯಾಚರಣೆ ನಡೆಸಿ, ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ.

><><><><><><><><><

೨೦೦೬ ರ ಮುಂಬೈ ರೈಲು ಸ್ಫೋಟ ಪ್ರಕರಣದಲ್ಲಿ ಎಲ್ಲಾ ೧೨ ಆರೋಪಿಗಳನ್ನು ಖುಲಾಸೆಗೊಳಿಸಿದ ಬಾಂಬೆ ಹೈಕೋರ್ಟ್ ತೀರ್ಪನ್ನು ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಲು ಮಹಾರಾಷ್ಟ್ರ ಸರ್ಕಾರ ನಿರ್ಧರಿಸಿದೆ. ಸುದ್ದಿಗಾರರೊಂದಿಗೆ ಮಾತನಾಡಿದ ಮಹಾರಾಷ್ಟ್ರ ಸಚಿವ ಚಂದ್ರಶೇಖರ್ ಬವಾಂಕುಲೆ, ಸರ್ಕಾರವು ಮೊದಲು ನ್ಯಾಯಾಲಯದ ಆದೇಶವನ್ನು ಅಧ್ಯಯನ ಮಾಡಲಿದೆ. ಮುಂದಿನ ಹಂತವನ್ನು ನಿರ್ಧರಿಸುವ ಮೊದಲು ಕಾನೂನು ಚೌಕಟ್ಟನ್ನು ಪರಿಶೀಲಿಸುತ್ತದೆ ಎಂದು ಹೇಳಿದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಗಳನ್ನು ಸಾಬೀತುಪಡಿಸಲು ಪ್ರಾಸಿಕ್ಯೂ?ನ್ ವಿಫಲವಾಗಿದೆ ಎಂದು ಹೇಳುವ ಮೂಲಕ ಬಾಂಬೆ ಹೈಕೋರ್ಟ್ ನಿನ್ನೆ ೧೨ ಆರೋಪಿಗಳ ವಿರುದ್ಧದ ಶಿಕ್ಷೆಯನ್ನು ರದ್ದುಪಡಿಸಿತು. ೨೦೦೬ ರ ಜುಲೈ ೧೧ ರಂದು ಸಂಭವಿಸಿದ ಮುಂಬೈನ ಉಪನಗರ ರೈಲು ಸರಣಿ ಸ್ಫೋಟಗಳಲ್ಲಿ ೧೮೦ ಕ್ಕೂ ಹೆಚ್ಚು ಜನರ ಮೃತಪಟ್ಟಿದ್ದು, ಅನೇಕರು ಗಾಯಗೊಂಡಿದ್ದರು.

><><><><><><><><><

ಚೆಸ್‌ನಲ್ಲಿ, ಅಂತಾರಾಷ್ಟ್ರೀಯ ಮಾಸ್ಟರ್ ದಿವ್ಯಾ ದೇಶಮುಖ್, ಜಾರ್ಜಿಯಾದ ಬಟುಮಿಯಲ್ಲಿ ನಡೆದ ಫಿಡೆ ಮಹಿಳಾ ವಿಶ್ವಕಪ್ ೨೦೨೫ರ ಸೆಮಿಫೈನಲ್‌ಗೆ ಮುನ್ನಡೆ ಸಾಧಿಸಿದ ಎರಡನೇ ಭಾರತೀಯ ಮಹಿಳೆ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಕ್ಷಿಪ್ರ ಟೈ-ಬ್ರೇಕ್‌ನಲ್ಲಿ, ದಿವ್ಯಾ ಅವರು ಗ್ರ್ಯಾಂಡ್ ಮಾಸ್ಟರ್ ಹರಿಕಾ ದ್ರೋಣವಲ್ಲಿ ಅವರನ್ನು ೨-೦ ಅಂತರದಿಂದ ಸೋಲಿಸಿದರು. ಭಾರತದ ಗ್ರ್ಯಾಂಡ್ ಮಾಸ್ಟರ್ ಕೊನೆರು ಹಂಪಿ ಕೂಡ ಸೆಮಿಫೈನಲ್ ಪ್ರವೇಶಿಸಿದ್ದಾರೆ. ಸೆಮಿಫೈನಲ್‌ನಲ್ಲಿ, ದಿವ್ಯಾ ಅವರು ಚೀನಾದ ಗ್ರ್ಯಾಂಡ್ ಮಾಸ್ಟರ್ ಟಾನ್ ಝೊಂಗ್ಯಿ ಅವರನ್ನು ಎದುರಿಸಲಿದ್ದಾರೆ. ಕೊನೆರು ಹಂಪಿ ಇಂದು ಸಂಜೆ ಗ್ರ್ಯಾಂಡ್ ಬೆಲ್ಲಾಜಿಯೊದಲ್ಲಿ ನಡೆಯುವ ಸೆಮಿಫೈನಲ್‌ನಲ್ಲಿ ಚೀನಾದ ಗ್ರ್ಯಾಂಡ್ ಮಾಸ್ಟರ್ ಲೀ ಟಿಂಗ್ಜಿ ವಿರುದ್ಧ ಸೆಣಸಲಿದ್ದಾರೆ.

><><><><><><><><><

ಪ್ರತಿ ಮತಗಟ್ಟೆಯೂ ಈಗ ೧ ಸಾವಿರದ ೨೦೦ ಕ್ಕಿಂತ ಕಡಿಮೆ ಮತದಾರರಿಗೆ ಅವಕಾಶ ಕಲ್ಪಿಸುವ ದೇಶದ ಮೊದಲ ರಾಜ್ಯ ಬಿಹಾರವಾಗಿದೆ.ಈ ಮಾಹಿತಿಯನ್ನು ನಿನ್ನೆ ಘೋಷಿಸಿದ ಚುನಾವಣಾ ಆಯೋಗವು, ದೀರ್ಘ ಸರತಿ ಸಾಲುಗಳನ್ನು ಕಡಿಮೆ ಮಾಡುವುದು ಮತ್ತು ಮತದಾನವನ್ನು ಹೆಚ್ಚು

ಅನುಕೂಲಕರವಾಗಿಸುವ ಗುರಿಯನ್ನು ಈ ಕ್ರಮ ಹೊಂದಿದೆ. ಇದನ್ನು ಸಾಧಿಸಲು, ರಾಜ್ಯಾದ್ಯಂತ ೧೨,೮೧೭ ಹೊಸ ಮತಗಟ್ಟೆಗಳನ್ನು ಸೇರಿಸಲಾಗಿದೆ ಎಂದು ತಿಳಿಸಿದೆ.ಮುಂದಿನ ತಿಂಗಳ ೧ ರಿಂದ, ಕರಡು ಮತದಾರರ ಪಟ್ಟಿಯಲ್ಲಿ ಯಾವುದೇ ಸೇರ್ಪಡೆ, ತೆಗೆದುಹಾಕುವುದು ಅಥವಾ ತಿದ್ದುಪಡಿಗಳ ಬಗ್ಗೆ ಸಾರ್ವಜನಿಕರು ಆಕ್ಷೇಪಣೆಗಳನ್ನು ಸಲ್ಲಿಸಬಹುದು ಎಂದು ಚುನಾವಣಾ ಆಯೋಗ ತಿಳಿಸಿದೆ.

><><><><><><><><><

ಮೊಣಕಾಲಿನ ಗಾಯದಿಂದಾಗಿ ಆಲ್‌ರೌಂಡರ್ ನಿತೀಶ್ ಕುಮಾರ್ ರೆಡ್ಡಿ ಇಂಗ್ಲೆಂಡ್ ವಿರುದ್ಧದ ಆಂಡರ್ಸನ್-ತೆಂಡೂಲ್ಕರ್ ಟ್ರೋಫಿಯ ಉಳಿದ ಎರಡು ಟೆಸ್ಟ್ ಪಂದ್ಯಗಳಿಂದ ಹೊರಗುಳಿದಿದ್ದಾರೆ ಎಂದು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ-ಬಿಸಿಸಿಐ ತಿಳಿಸಿದೆ. ಅಲ್ಲದೇ, ಎಡಗೈ ವೇಗದ ಬೌಲರ್ ಅರ್ಶ್‌ದೀಪ್ ಸಿಂಗ್ ಎಡಗೈ ಹೆಬ್ಬೆರಳಿಗೆ ಆದ ಗಾಯದಿಂದಾಗಿ ಮ್ಯಾಂಚೆಸ್ಟರ್‌ನಲ್ಲಿ ಇಂಗ್ಲೆಂಡ್ ವಿರುದ್ಧದ ನಾಲ್ಕನೇ ಟೆಸ್ಟ್ ಪಂದ್ಯದಿಂದ ಹೊರಗುಳಿದಿದ್ದಾರೆ. ಈ ನಡುವೆ, ಅನ್ಶುಲ್ ಕಾಂಬೋಜ್ ತಂಡಕ್ಕೆ ಸೇರ್ಪಡೆಯಾಗಿದ್ದಾರೆ.

><><><><><><><><><

ನಮ್ಮ ಮುಂದಿನ ವಾರ್ತಾ ಪ್ರಸಾರ ೧೨ ಗಂಟೆಗೆ

><><><><><><><><><